ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	162
ಮಾನ್ಯ ಸದಸ್ಯರ ಹೆಸರು	ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	02.03.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳ ಉತ್ತಮ ವ್ಯಾಸಂಗದ ಹಿತದೃಷ್ಟಿಯಿಂದ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ಹಾಗೂ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ರಾಜ್ಯದಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿ ಸ್ವಂತ ಕಟ್ಟಡಕ್ಕೆ ಅನುದಾನ ಬಿಡುಗಡೆಗೊಳಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2438 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇದುವರೆವಿಗೂ ಒಟ್ಟು 1325 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗಿದೆ. ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಕಳೆದ 5 ವರ್ಷಗಳಿಂದ ಒದಗಿಸಿರುವ ಅನುದಾನದ ವಿವರಗಳು ಕೆಳಕಂಡಂತಿವೆ.

ರೂ.ಕೋಟಿಗಳಲ್ಲಿ

ಕ್ರ.ಸಂ	ವರ್ಷ	ಮೊತ್ತ
1)	2015–16	45.00
2)	2016–17	143.50
3)	2017–18	278.90
4)	2018–19	280.00
5)	2019–20	331.68

ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆ ಹಾಗೂ ನಿವೇಶನಗಳ ಲಭ್ಯತೆಗೆ ಅನುಗುಣವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಪ್ರಸ್ತುತ 277 ವಿದ್ಯಾರ್ಥಿನಿಲಯ ಕಟ್ಟಡಗಳು ನಿರ್ಮಾಣದ ಹಂತದಲ್ಲಿದ್ದು ಸಂಪೂರ್ಣ ಮಾಹಿತಿಯು www.backwardclasses.kar.nic.in ರಲ್ಲಿ ಲಭ್ಯವಿರುತ್ತದೆ.

ಸಂಖ್ಯೆ:ಹಿಂವಕ 132 ಬಿಎಂಎಸ್ 2020

(ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ